## ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,

## ಪುಲಿಕೇಶಿನಗರ ಉಪ ವಿಭಾಗ, ವಾರ್ಡ್ ನಂ.47(ಡಿ.ಜೆ ಹಳ್ಳಿ)

## ವಾರ್ಡ್ ಸಮಿತಿ ಸಭೆ, ದಿನಾಂಕ:18-07-2022 ರ ಸಭಾ ನಡವಳಿ

ಸಂಖ್ಯೆ:ಸ.ಕಾನಿ.ಅ (ಪು.ನ)/ಪಿಆರ್/06/22-23

ದಿನಾಂಕ: 18-07-2022 ರಂದು ಮಧ್ಯಾಹ್ನ 12.00 ಗಂಟೆಗೆ ವಾರ್ಡ್ ನಂ. 47-ಡಿ.ಜೆ.ಹಳ್ಳಿ ವ್ಯಾಪ್ತಿಯಲ್ಲಿ ವಾರ್ಡ್ ಸಮಿತಿಯ ಸಭೆಯನ್ನು ನೋಡಲ್ ಅಧಿಕಾರಿಯವರ ಅಧ್ಯಕ್ಷತೆಯಲ್ಲಿ ಡಿ.ಜೆ ಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿ.

| ಕ್ರಮ ಸಂಖ್ಯೆ | ಸಭೆಗೆ ಹಾಜರಾಗಿರುವ ಅಧಿಕಾರಿಗಳು | ಹುದ್ದೆ |
|---|---|---|
| 1. | S. Vishwanatha | Nodal Officer ward No. 47- D J Halli & Asst. Executive Engineer, J.C Nagar Sub-division |
| 2. | Sri Yuvakumar | Asst Engineer (Ward NO.47) |
| 3. | Sri Nagaraj | Tax Inspector |
| 4. | Smt.Suguna | Tax Inspector |
| 5. | Sri Venkatesh | Horticulture Inspector |
| 6. | Sri Ragavendra | PSI D J Halli Police Station |
| 7. | Sri mohammed ibrahim | BWSSB |
| 8. | Sri. Mallesh | BESCOM |
| 9. | Sri.Mahesh Kumar. M | Sanitary Dhafedhar |
| 10. | Sri Suresh | Ward Committee Member |
| 11. | Sri Syed Ansar Pasha | Ward Committee Member |
| 12. | Sri Gopinath | Ward Committee Member |

ಶ್ರೀ, ಎಸ್.ವಿಶ್ವನಾಥ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಜೆ.ಸಿ ನಗರ ಉಪ ವಿಭಾಗ ಹಾಗೂ ವಾರ್ಡ್ ಕಮಿಟಿ ಅಧ್ಯಕ್ಷರು (ನೋಡಲ್ ಅಧಿಕಾರಿ) ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆಗೆ ಹಾಜರಾಗಿದ್ದ ವಿವಿಧ ಇಲಾಖೆಯ ಅಧಿಕಾರಿ/ನೌಕರರು ಹಾಗೂ ವಿವಿಧ ಬಡಾವಣೆಯ ಕ್ಷೇಮಾಭಿವೃದ್ಧಿ ಸಂಘದ ಪದಾಧಿಕಾರಿಗಳು ಹಾಗೂ ಸಾರ್ವಜನಿಕರಿಗೆ ಸ್ವಾಗತಿಸುವ ಮೂಲಕ ಸಭೆಯನ್ನು ಪ್ರಾರಂಭಿಸುತ್ತಾ ವಾರ್ಡ್ ಕಮಿಟಿ ಸಭೆಯಲ್ಲಿ ಚರ್ಚಿಸಬೇಕಾದ ಅಜೆಂಡ ವಿಷಯಗಳ ಬಗ್ಗೆ ತಿಳಿಸಿದರು.

ದಿನಾಂಕ : 08-07-2022 ರಂದು ನಡೆದ ಸಭೆಯ ಸಭಾ ನಡವಳಿಯನ್ನು ಚರ್ಚಿಸಿ ಬಾಕಿ ಇರುವ ಕುಂದು ಕೊರತೆಗಳ ಕುರಿತು ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಕ್ರಮ ಕೈಗೊಂಡು ಇತ್ಯರ್ಥಪಡಿಸುವಂತೆ ಸಭೆಯಲ್ಲಿ ತಿಳಿಸಿರುತ್ತಾರೆ.

1. ವಾರ್ಡ್ ನಂ.47 ರ ದೇವರಜೀವನಹಳ್ಳಿ ವ್ಯಾಪ್ತಿಗೆ ಒಳಪಡುವ ದೊಡ್ಡಣ್ಣನಗರ ಎನ್.ಪಿ.ಪ್ಯಾಕ್ಟರಿ ಹತ್ತಿರ ರಸ್ತೆಯಲ್ಲಿ ಗುಂಡಿ ಬಿದ್ದಿದ್ದು, ಇದರಿಂದ ರಸ್ತೆಯಲ್ಲಿ ನೀರು ನಿಲ್ಲುತ್ತಿದ್ದು, ಸಾರ್ವಜನಿಕ ಸಂಚಾರಕ್ಕೆ ತುಂಬಾ ತೊಂದರೆ ಉಂಟಾಗಿದ್ದು, ಇದನ್ನು ದುರಸ್ಥಿ ಪಡಿಸಲು ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.

2. Old KEB ರಸ್ತೆ ಮುನೇಶ್ವರ ದೇವಸ್ಥಾನ ಹತ್ತಿರ ರಸ್ತೆಯಲ್ಲಿ ನೀರು ತುಂಬಿದ್ದು, ಈ ಕುರಿತು ಕ್ರಮ ಕೈಗೊಳ್ಳುವಂತೆ ವಾರ್ಡಿನ ಸಹಾಯಕ ಅಭಿಯಂತರರಿಗೆ ತಿಳಿಸಲಾಯಿತು.

3. ಹಿಂದಿನ ಸಭೆಯಲ್ಲಿ ದಿನಾಂಕ: 22.07.2022 ಹಾಗೂ 23.07.2022 ರಂದು ಮುರುಗನ್ ದೇವಾಲಯದ ಬಳಿ ಆಯೋಜಿಸಲಾಗಿರುವ ಪೂಜಾ ಕಾರ್ಯಕ್ರಮಕ್ಕೆ ಸದರಿ ಕೈಗೊಳ್ಳಬೇಕಾಗಿರುವ ಅಗತ್ಯ ಮುಂಜಾಗ್ರತ ಕ್ರಮಗಳನ್ನು ಸಭೆಯಲ್ಲಿ ಹಾಜರಿದ್ದ ವಾರ್ಡಿನ ಹಿರಿಯ ಆರೋಗ್ಯ ನಿರೀಕ್ಷಕರಿಗೆ ಸೂಚಿಸಲಾಯಿತು.

4. ವಾರ್ಡ್ 47ರ ದೇವರಜೀವನಹಳ್ಳಿ ವ್ಯಾಪ್ತಿಗೆ ಒಳಪಡುವ ಉರ್ದು ಶಾಲೆಯ ಬಳಿ BESCOM ಸಿಬ್ಬಂಧಿಯವರು ಟಿ.ಸಿ ಅಳವಡಿಸುವ ಸಮಯದಲ್ಲಿ ಹಾನಿಗೊಳಗಾಗಿರುವ Sanitary Pipe Line ಅನ್ನು ದುರಸ್ಥಿಗೊಳಿಸಲು ಸಂಬಂಧಪಟ್ಟ BESCOM ಗುತ್ತಿಗರದಾರರಿಗೆ ಸೂಚಿಸುವಂತೆ ಸಭೆಯಲ್ಲಿ ಹಾಜರಿದ್ದ ಶ್ರೀ,ಶಿವಾಜಿ ರವರಿಗೆ ತಿಳಿಸಲಾಯಿತು.

Scanned with CamSc

5. ವಾರ್ಡ್ ನಂ 47 ರ ದೇವರಜೀವನಹಳ್ಳಿ ವ್ಯಾಪ್ತಿಗೆ ಒಳಪಡುವ ಮೋದಿ ಮುಖ್ಯರಸ್ತೆ, ಶ್ರೀನಿವಾಸನಗರ ಈ ಸ್ಥಳಗಳಲ್ಲಿ ಈ ಹಿಂದೆ ಅಳವಡಿಸಲಾದ sodium vapour lamp ಗಳು ಕೆಟ್ಟುಹೋಗಿದ್ದು, ಇವುಗಳನ್ನು ಬದಲಿಸುವಂತೆ ಸಭೆಯಲ್ಲಿ ಬೀದಿ ದೀಪಗಳ ನಿರ್ವಹಣೆ ಉಸ್ತುವಾರಿ ಶ್ರೀ.ಸೈಪ್‌ಉಲ್ಲಾ ರವರಿಗೆ ಸೂಚಿಸಲಾಯಿತು.

ಸಹಿ

(ಎಸ್.ವಿಶ್ವನಾಥ)
ಅಧ್ಯಕ್ಷರು (ನೋಡಲ್ ಅಧಿಕಾರಿ)
ವಾರ್ಡ್ ಸಮಿತಿ, ವಾರ್ಡ್ ಸಂಖ್ಯೆ: 47

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
5. ಕಂದಾಯ ಅಧಿಕಾರಿ (ಪುಲಕೇಶಿನಗರ), ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
6. ಸಹಾಯಕ ಕಾರ್ಯಪಾಲಕ ಅಭಿಯಂತರರು(ಪುಲಿಕೇಶಿನಗರ) ಎಸ್‌ಡಬ್ಲ್ಯೂಎಂ, ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ರವರ ಅವಗಾಹನೆಗಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು (ಪುಲಿಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
9. ಸಹಾಯಕ ಅಭಿಯಂತರರು(ವಿದ್ಯುತ್/ಪುಲಕೇಶಿನಗರ) ಬಿಬಿಎಂಪಿ ರವರ ಅವಗಾಹನೆಗಾಗಿ ಕಳುಹಿಸಿದೆ.
10. ವಾರ್ಡ್ ವ್ಯಾಪ್ತಿಯ ಎಲ್ಲಾ ವೇಲ್‌ಫೇರ್ ಅಸೋಷಿಯನ್ಸ್ ರವರಿಗೆ.
11. ಕಛೇರಿ ಕಡತಕ್ಕೆ.

Scanned with CamSc